# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ವಿವಿಧ ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಮತ್ತು ಅವುಗಳ ವ್ಯಾಪ್ತಿಯ ಶಿಕ್ಷಣ/ಸಮಾಜ ಕಲ್ಯಾಣ ಇಲಾಖೆಗಳಲ್ಲಿ ತೆರವಾಗಿದ್ದ ಹುದ್ದೆಗಳು ಭರ್ತಿಯಾದ್ದರಿಂದ ವೇತನ ವೆಚ್ಚಕ್ಕಾಗಿ ಕೊರತೆಯಾಗಿರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

ಓದಲಾಗಿದೆ:

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಕಾರ್ಯನಿರ್ವಾಹಕ ಅಧಿಕಾರಿಗಳ ಪತ್ರಗಳು

ಪ್ರಸ್ತಾವನೆ:

ರಾಜ್ಯದ ವಿವಿಧ ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಮತ್ತು ಅವುಗಳ ವ್ಯಾಪ್ತಿಯ ಶಿಕ್ಷಣ ಇಲಾಖೆಯಲ್ಲಿ ತೆರವಾಗಿದ್ದ ಅಧಿಕಾರಿ/ಸಿಬ್ಬಂದಿಯವರುಗಳ ಹುದ್ದೆಗಳು ಭರ್ತಿಯಾದ್ದರಿಂದ ಅಗತ್ಯ ವೇತನ ವೆಚ್ಚಕ್ಕಾಗಿ ಕೊರತೆಯಾಗಿರುವ ಅನುದಾನವನ್ನು ಹೆಚ್ಚುವರಿಯಾಗಿ ಒದಗಿಸಿ ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಲಾಗಿದೆ. ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಕಾರ್ಯಕ್ರಮದಡಿ ಕೋರಿರುವ ರೂ234.24ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2202–01–196–1–01–412ರಡಿ ಮತ್ತು ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿ ಕೋರಿರುವ ರೂ37.10ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515–00–197–1–10–300 ಮತ್ತು 2202–01–196–1–01–300ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 71 ವೆಚ್ಚ 6/2020 ದಿನಾಂಕ: 20ನೇ ಮಾರ್ಚ್ 2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಗಿನ ಅನುಬಂಧದ ಕಾಲಂ 2ರ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ಕಾಲಂ 5ರನ್ವಯ ಒಟ್ಟು ರೂ.271.34ಲಕ್ಷ (ರೂಪಾಯಿ ಎರಡು ನೂರ ಎಪ್ಪತ್ತೊಂದು ಲಕ್ಷದ ಮೂವತ್ನಾಲ್ಕು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

| ಕ್ರ.ಸಂ | ಜಿಲ್ಲಾ/ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಬಿಡುಗಡೆಗೊಳಿಸಿದ ಲೆಕ್ಕ ಶೀರ್ಷಿಕೆ | ಬಿಡುಗಡೆಗೊಳಿಸಿದ ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|---|
| 1 | ಮಂಡ್ಯ | 2202–00–101–0–27–001 | 2202–01–196–1–01–412 | 234.24 |
| 2 | ನಾಗಮಂಗಲ | 2515–00–102–0–61–001 | 2515–00–197–1–10–300 | 1414219210 35.50 |
| 3 | ಚಿಂತಾಮಣಿ | 2202–00–101–0–65–101 | 2202–01–197–1–01–300 | 1414219174 0.85 |
| 4 | ಬಳ್ಳಾರಿ | 2225–00–103–0–74–001 | 2515–00–197–1–10–300 | 1414219192 0.75 |
| | ಒಟ್ಟು | | | 271.34 |

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ–2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಹಾಗೂ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ತಾಲ್ಲೂಕು ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

2ನೇ ಪುಟಕ್ಕೆ ಮುಂದುವರೆದಿದೆ....

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ /ಶಿಕ್ಷಣ/ಸಮಾಜ ಕಲ್ಯಾಣ ಇಲಾಖೆ/
4. ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು,
5. ಅಪರ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಪಟ್ಟ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
7. ಸಂಬಂಧಪಟ್ಟ ಜಿಲ್ಲಾ/ಉಪ ಖಜಾನಾಧಿಕಾರಿಗಳು
8. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ